# Bangalore
# Regional News
# 26.06.2025 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ರಾಜ್ಯದ ವಿವಿಧೆಡೆ ಧಾರಾಕಾರ ಮಳೆ ; ಕೆಆರ್‌ಎಸ್ ಭರ್ತಿ - ಶಿರಾಡಿ ಘಾಟ್ ರಸ್ತೆ ಸಂಚಾರ ನಿರ್ಬಂಧ
2. ರೈತರ ಸಮಸ್ಯೆ ಬಗೆಹರಿಸಲು ಕಂದಾಯ ಇಲಾಖೆ ಸನ್ನದ್ಧ ; ಸಚಿವ ಕೃಷ್ಣ ಬೈರೇಗೌಡ
3. ಖಾಸಗಿ ಅಕಾಡಮಿ ಸಹಯೋಗದಲ್ಲಿ ಜ್ಞಾನಸೇತು ಅನುಷ್ಠಾನಗೊಳಿಸಲು ಸರ್ಕಾರ ಅನುಮೋದನೆ
4. ಶೀಘ್ರವೇ ರಾಜ್ಯಾಧ್ಯಕ್ಷರ ಹೆಸರು ಘೋಷಣೆ : ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸ್ಪಷ್ಟನೆ
5. ಇಂದು ಅಂತಾರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ದಿನ ; ರಾಜ್ಯದೆಲ್ಲೆಡೆ ಜನ ಜಾಗೃತಿ

<><><><>

ರಾಜ್ಯದ ವಿವಿಧೆಡೆ ಮಳೆಯಾಗುತ್ತಿದೆ. ಹಾಸನ ಜಿಲ್ಲೆಯ ಮಲೆನಾಡು ಭಾಗದಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಗೆ ಸಕಲೇಶಪುರ ತಾಲೂಕಿನ ಮಾರನಹಳ್ಳಿ ಬಳಿ ರಾಷ್ಟ್ರೀಯ ಹೆದ್ದಾರಿ ೭೫ರಲ್ಲಿ ಗುಡ್ಡ ಕುಸಿದಿದ್ದು ಹಾಸನ-ಮಂಗಳೂರು ಮಾರ್ಗದ ಶಿರಾಡಿ ಘಾಟ್ ರಸ್ತೆ ಸಂಚಾರ ನಿರ್ಬಂಧಿಸಲಾಗಿದೆ. ತಡರಾತ್ರಿ ಭೂಕುಸಿತ ಉಂಟಾಗಿದ್ದು ಸ್ಥಳಕ್ಕೆ ಉಪವಿಭಾಗಾಧಿಕಾರಿ ಶ್ರುತಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಶೀಘ್ರವೇ ಮಣ್ಣು ತೆರವು ಮಾಡಿ ಸಂಚಾರಕ್ಕೆ ಅವಕಾಶ ಮಾಡಿ ಕೊಡಲಿದ್ದೇವೆ ಎಂದು ಅವರು ಮಾಹಿತಿ ನೀಡಿದ್ದಾರೆ. ರಾಷ್ಟ್ರೀಯ ಹೆದ್ದಾರಿ ೭೫ರ ಮೇಲೆ ಮಣ್ಣು ಕುಸಿತವಾದ ಹಿನ್ನೆಲೆಯಲ್ಲಿ ಹಾಸನ - ಮಂಗಳೂರು ಮಾರ್ಗವಾಗಿ ತೆರಳುವ ವಾಹನ ಸವಾರರು ಪರ್ಯಾಯ ಮಾರ್ಗವಾಗಿರುವ ಮೂಡಿಗೆರೆ ಚಾರ್ಮಡಿ ಘಾಟ್ ರಸ್ತೆಯನ್ನು ಅವಲಂಬಿಸುವಂತೆ ಜಿಲ್ಲಾಡಳಿತ ಸೂಚನೆ ನೀಡಿದೆ. ಕೊಡಗಿನಲ್ಲಿ ವ್ಯಾಪಕ ಮಳೆಯಾಗುತ್ತಿರುವ ಪರಿಣಾಮ ಮಂಡ್ಯ ಜಿಲ್ಲೆಯ ಕೆ.ಆರ್.ಎಸ್. ಅಣೆಕಟ್ಟೆಯ ಕಾವೇರಿ ನದಿ ಪಾತ್ರದಲ್ಲಿ ಪ್ರವಾಹದ ಭೀತಿ ಎದುರಾಗಿದೆ. ಸುರಕ್ಷತಾ ದೃಷ್ಟಿಯಿಂದ ಕೆಆರ್‌ಎಸ್ ಅಣೆಕಟ್ಟು ೧೨೧ ಅಡಿ ಭರ್ತಿಯಾಗುತ್ತಲೇ ನದಿಗೆ ನೀರು ಬಿಡಲಾಗುತ್ತಿದ್ದು, ೩೩ ಸಾವಿರ ಕ್ಯೂಸೆಕ್ ಒಳ ಹರಿವು ಇದೆ. ಅಷ್ಟೇ ಪ್ರಮಾಣದ ನೀರನ್ನು ನದಿಗೆ ಬಿಡಲಾಗುತ್ತಿದೆ. ಕೊಡಗಿನಿಂದ ಮಾತ್ರವಲ್ಲದೇ ಕಬಿನಿ, ಹಾರಂಗಿ ಹಾಗೂ ಹೇಮಾವತಿ ಜಲಾಶಯಗಳಿಂದಲೂ ಕೆ.ಆರ್.ಎಸ್.ಗೆ ನೀರು ಹರಿದು ಬರುತ್ತಿರುವುದರಿಂದ ಹೊರ

ಹರಿವಿನ ಪ್ರಮಾಣ ಇನ್ನೂ ಹೆಚ್ಚಾಗಲಿದೆ ಎಂದು ನೀರಾವರಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಶ್ರೀರಂಗಪಟ್ಟಣದ ಹಲವು ನದಿ ಪಾತ್ರಗಳ ಗ್ರಾಮಗಳಿಗೆ ಮುಳುಗಡೆಯ ಭೀತಿ ಎದುರಾಗಿದೆ. ಯಾರೂ ಸಹ ನದಿಗೆ ಇಳಿಯದಂತೆ ಶ್ರೀರಂಗಪಟ್ಟಣ ತಾಲ್ಲೂಕು ಆಡಳಿತ ಸೂಚನೆ ನೀಡಿದೆ.

<><><>

ಕಂದಾಯ ಸಚಿವ ಕೃಷ್ಣ ಬೈರೇಗೌಡ ಚಿಕ್ಕಮಗಳೂರು ಜಿಲ್ಲೆಯ ತಮ್ಮ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಈ ವೇಳೆ ಹತ್ತಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಪೋಡಿ ದುರಸ್ತಿ ವಿಚಾರಗಳ ಕುರಿತು ಚರ್ಚೆ ನಡೆಸಿದರು. ಸಮರ್ಪಕವಾಗಿ ಕಾರ್ಯನಿರ್ವಹಿಸದ ಅಧಿಕಾರಿ ಮತ್ತು ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡರು. ಬಳಿಕ ಕೃಷ್ಣಬೈರೇಗೌಡ, ಪೋಡಿ ದುರಸ್ತಿ ವಿಚಾರ ಸಂಬಂಧ ರೈತರಿಗೆ ಶಾಶ್ವತ ಪರಿಹಾರ ನೀಡುವ ಕೆಲಸಗಳನ್ನು ಇಲಾಖೆ ಮಾಡುತ್ತಿದೆ. ಅಭಿಯಾನ ಮಾದರಿಯಲ್ಲಿ ಅಧಿಕಾರಿಗಳು ರೈತರ ಮನೆಮನೆಗೆ ತೆರಳಿ ಪೋಡಿ ದುರಸ್ತಿ ಕಾರ್ಯ ಮಾಡಿಕೊಡುತ್ತಿದ್ದಾರೆ ಎಂದು ಹೇಳಿದರು. ಗ್ರಾಮ ಆಡಳಿತ ಅಧಿಕಾರಿಗಳಿಗೆ ಲಾಪ್ ಟಾಪ್ ನೀಡುವ ಮೂಲಕ ಆಡಳಿತ ಯಂತ್ರಕ್ಕೆ ಮತ್ತಷ್ಟು ವೇಗ ನೀಡಲಾಗುತ್ತಿದೆ. ರೈತರ ಯಾವುದೇ ಸಮಸ್ಯೆಗಳನ್ನು ಪರಿಹರಿಸಲು ಕಂದಾಯ ಇಲಾಖೆಯು ಸನ್ನದ್ಧವಾಗಿದೆ. ಕಚೇರಿಗಳಿಗೆ ಸಾರ್ವಜನಿಕರ ಅಲೆದಾಟ ತಪ್ಪಿಸುವ ಕಾರ್ಯ ಮಾಡಲಾಗುತ್ತಿದೆ ಎಂದು ತಿಳಿಸಿದರು.

<><><>

ತುಮಕೂರಿನಲ್ಲಿ ನಡೆಯಬೇಕಿದ್ದ ಹೇಮಾವತಿ ಲಿಂಕ್ ಕೆನಾಲ್ ಸಭೆಯನ್ನು ಕೇಂದ್ರ ಸಚಿವ ವಿ. ಸೋಮಣ್ಣ ಮನವಿ ಮೇರೆಗೆ ಜುಲೈ ೪ ಹಾಗೂ ೫ಕ್ಕೆ ಮುಂದೂಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರೊರಂದಿಗೆ ಮಾತನಾಡಿದ ಅವರು, ಇಂದು ತುಮಕೂರಿನಲ್ಲಿ ಎತ್ತಿನಹೊಳೆ ಯೋಜನೆ ಕಾಮಗಾರಿಯ ಗುತ್ತಿಗೆದಾರರ ಸಭೆ ನಡೆಸಲು ತೀರ್ಮಾನಿಸಲಾಗಿದೆ. ಗೃಹ ಸಚಿವ ಪರಮೇಶ್ವರ್ ಅನುಪಸ್ಥಿತಿ ಹಿನ್ನೆಲೆಯಲ್ಲಿ ಈ ಸಭೆಯನ್ನು ಬೆಂಗಳೂರಿಗೆ ಸ್ಥಳಾಂತರಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಎತ್ತಿನಹೊಳೆ ಯೋಜನೆಯನ್ನು ನಿಗದಿತ ಸಮಯದ ಒಳಗೆ ಪೂರ್ಣಗೊಳಿಸಬೇಕು ಎಂದು ಮುಖ್ಯಮಂತ್ರಿಗಳು ನಿರ್ದೇಶನ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಯೋಜನೆಯ ಕಾಮಗಾರಿ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಹೇಳಿದ್ದಾರೆ.

<><><>

ರಾಜ್ಯ ಸರ್ಕಾರವು ೨೦೨೫-೨೬ನೇ ಸಾಲಿನ ಆಯವ್ಯಯದ ಅನ್ವಯ 'ಜ್ಞಾನಸೇತು' ಕಾರ್ಯಕ್ರಮವನ್ನು ಖಾನ್ ಅಕಾಡೆಮಿ ಸಹಯೋಗದಲ್ಲಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿದೆ. ಈ ಕಾರ್ಯಕ್ರಮವು ರಾಜ್ಯದ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ೬ರಿಂದ ೧೨ನೇ ತರಗತಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಡಿಜಿಟಲ್ ಕಲಿಕೆಯನ್ನು ಒದಗಿಸುವ ಗುರಿ ಹೊಂದಿದೆ. ಈ ಆಕಾಡೆಮಿ, ಒಂದು ಲಾಭರಹಿತ ಸಂಸ್ಥೆಯಾಗಿದ್ದು, ವಿದ್ಯಾರ್ಥಿಗಳಿಗೆ ವಿಶ್ವದರ್ಜೆಯ ಶಿಕ್ಷಣವನ್ನು ಉಚಿತವಾಗಿ ಒದಗಿಸುತ್ತದೆ. ಎನ್‌ಸಿಇಆರ್‌ಟಿ ಪಠ್ಯಕ್ರಮ ಆಧಾರಿತ ೧ರಿಂದ ೧೦ನೇ ತರಗತಿ ಹಾಗೂ ಪ್ರಥಮ ಮತ್ತು ದ್ವಿತೀಯ ಪಿಯುಸಿ ವಿಷಯಗಳು ಉಚಿತವಾಗಿ ಲಭ್ಯವಿರುತ್ತವೆ. ಈ ಅಕಾಡೆಮಿಯಲ್ಲಿ ಲಭ್ಯವಿರುವ ಡಿಜಿಟಲ್ ಸಂಪನ್ಮೂಲಗಳು ಮತ್ತು ಅಭ್ಯಾಸಗಳನ್ನು ಬಳಸಿಕೊಂಡು ಗಣಿತ ಮತ್ತು ವಿಜ್ಞಾನ ಬೋಧನಾ ವಿಧಾನದಲ್ಲಿ ನಾವೀನ್ಯತೆ ಅಳವಡಿಸಿಕೊಳ್ಳುವ ಉದ್ದೇಶವನ್ನು ಕಾರ್ಯಕ್ರಮ ಹೊಂದಿದೆ. ಸಿಇಟಿ, ಜೆಇಇ, ನೀಟ್, ಕ್ಲಾಟ್, ಕ್ಯುಇಟಿ ಮತ್ತು ಸಿಎ ಪ್ರವೇಶ ಪರೀಕ್ಷೆಗಳಿಗೆ ವಿದ್ಯಾರ್ಥಿಗಳನ್ನು ಸಿದ್ಧಪಡಿಸಲು ಅಕಾಡೆಮಿಯ ಅಭ್ಯಾಸ ಮಾದರಿಗಳು, ಪರಿಕಲ್ಪನಾ ವೀಡಿಯೊಗಳು ಮತ್ತು ಪರೀಕ್ಷಾ ಉಪಕರಣಗಳನ್ನು ಬಳಸಲಾಗುತ್ತದೆ.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಜುಲೈ ೪ ರಂದು ದೇವನಹಳ್ಳಿ ಚನ್ನರಾಯಪಟ್ಟಣ ರೈತ ಹೋರಾಟಗಾರರು ಮತ್ತು ಸಂಯುಕ್ತ ಹೋರಾಟ ವೇದಿಕೆ ಮುಖಂಡರ ಜೊತೆ ಸಭೆ ನಡೆಸಲಿದ್ದಾರೆ. ಇಂದು ಕಾವೇರಿ ನಿವಾಸದಲ್ಲಿ ತಮ್ಮನ್ನು ಭೇಟಿ ಮಾಡಿದ ರೈತ ಮುಖಂಡರ ಜೊತೆ ಚರ್ಚಿಸಿದ ಅವರು, ರೈತರ ಬೇಡಿಕೆ ಮತ್ತು ಸಮಸ್ಯೆ ಕುರಿತಾಗಿ ಸಮಗ್ರ ಸಭೆ ನಡೆಸುವುದಾಗಿ ತಿಳಿಸಿದ್ದಾರೆ. ಚನ್ನರಾಯಪಟ್ಟಣ ಹೋಬಳಿಯ ೧೩ ಹಳ್ಳಿಗಳ ಜನರು ಒಂದು ಸಾವಿರದ ೧೭೭ ಎಕರೆ ಭೂಮಿ ಉಳಿಸಿಕೊಳ್ಳಲು ಕಳೆದ ಹಲವು ದಿನಗಳಿಂದ ಹೋರಾಟ ನಡೆಸುತ್ತಿದ್ದಾರೆ.

<><><>

ಅತಿ ಶೀಘ್ರವಾಗಿ ರಾಜ್ಯ ಒಳಗೊಂಡಂತೆ ಹಲವು ರಾಜ್ಯಾಧ್ಯಕ್ಷರ ಹೆಸರು ಘೋಷಣೆಯಾಗಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದ ೧೪ ರಾಜ್ಯಗಳ ರಾಜ್ಯಾಧ್ಯಕ್ಷರ ಆಯ್ಕೆ ಪ್ರಕ್ರಿಯೆ ಮುಗಿದಿದೆ. ಅತಿ ಶೀಘ್ರದಲ್ಲೇ ಇನ್ನು ಆರೇಳು ರಾಜ್ಯಗಳ ಅಧ್ಯಕ್ಷರ ಘೋಷಣೆ ಆಗಲಿದೆ. ಅದಾದ ಬಳಿಕ ರಾಷ್ಟ್ರೀಯ ಅಧ್ಯಕ್ಷರ ಘೋಷಣೆ ಆಗಲಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಬಿಜೆಪಿಯಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಇಂದು ಅಂತಾರಾಷ್ಟ್ರೀಯ ಮಾದಕ ವಸ್ತು ಸೇವನೆ ಮತ್ತು ಕಳ್ಳ ಸಾಗಾಣೆ ವಿರೋಧಿ ದಿನ. ಮಾದಕ ವಸ್ತುಗಳ ಸೇವನೆಯಿಂದ ದೇಹ ಮತ್ತು ಮನಸ್ಸಿನ ಸ್ವಾಸ್ಥ್ಯ ಕೆಡಲಿದೆ. ಈ ಹಿನ್ನೆಲೆಯಲ್ಲಿ ಇಂದು ರಾಜ್ಯಾದ್ಯಂತ ಮಾದಕ ದ್ರವ್ಯ ವಿರೋಧಿ ದಿನ ಆಚರಿಸಲಾಯಿತು. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾದಕ ದ್ರವ್ಯ ಸಮಾಜಕ್ಕೆ ಅಂಟಿದ ಕ್ಯಾನ್ಸರ್ ಆಗಿದೆ. ಮಾದಕ ದ್ರವ್ಯಮುಕ್ತ ಸಮಾಜ ನಿರ್ಮಾಣದ ಸಂಕಲ್ಪ ಸರ್ಕಾರದ್ದಾಗಿದ್ದು, ಎಲ್ಲರೂ ಸಹಕಾರ ನೀಡುವಂತೆ ಮನವಿ ಮಾಡಿದ್ದಾರೆ. ಅಂತಾರಾಷ್ಟ್ರೀಯ ಮಾದಕ ವ್ಯಸನ ವಿರೋಧಿ ದಿನಾಚರಣೆಯ ಅಂಗವಾಗಿ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ರಾಷ್ಟ್ರೀಯ ಸೇವಾ ಯೋಜನೆ ಮತ್ತು ಪೋಲೀಸ್ ಇಲಾಖೆಯ ಸಹಯೋಗದೊಂದಿಗೆ ಜಾಗೃತಿ ಅಭಿಯಾನ ನಡೆಸಿತು. ಸೆಂಟ್ರಲ್ ಕಾಲೇಜಿನ ಆವರಣದ ಗಡಿಯಾರ ಗೋಪುರದ ಬಳಿ ಏರ್ಪಡಿಸಲಾಗಿದ್ದ ಕಾರ್ಯಕ್ರಮದಲ್ಲಿ ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಿಯಾದ ಡಾ.ಎಂ.ಸಿ. ಶ್ರೀನಿವಾಸ್ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಚಿಕ್ಕಮಗಳೂರು ನಗರದಲ್ಲಿ ಇಂದು ಮಾದಕ ದ್ರವ್ಯ ವಿರೋಧಿ ದಿನಾಚರಣೆ ಅಂಗವಾಗಿ ಬೃಹತ್ ಜಾಗೃತಿ ಜಾಥ ನಡೆಯಿತು. ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮಾಟೆ ಜಾಥಾಗೆ ಚಾಲನೆ ನೀಡಿದರು. ಪೊಲೀಸ್ ಸಿಬ್ಬಂದಿ, ವೈದ್ಯಕೀಯ ವಿದ್ಯಾರ್ಥಿಗಳು, ಶಾಲಾ ಕಾಲೇಜು ವಿದ್ಯಾರ್ಥಿಗಳು, ಹಾಗೂ ಸಂಘ ಸಂಸ್ಥೆಗಳ ಸದಸ್ಯರು ಸೇರಿದಂತೆ ಸುಮಾರು ಎರಡು ಸಾವಿರಕ್ಕೂ ಹೆಚ್ಚು ಜನರು ಪಾಲ್ಗೊಂಡು ಮದ್ಯಪಾನ, ಧೂಮಪಾನ ಸೇರಿ ಮಾದಕ ದ್ರವ್ಯಗಳಿಂದಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಿದರು. ದಾವಣಗೆರೆ ಜಿಲ್ಲಾ ಪೊಲೀಸ್ ಇಲಾಖೆಯಿಂದ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ದಿನಾಚರಣೆಯಲ್ಲಿ ಪೂರ್ವ ವಲಯ ಪೊಲೀಸ್ ಮಹಾ ನಿರೀಕ್ಷಕ ಡಾ.ಬಿ.ಆರ್.ರವಿಕಾಂತೇಗೌಡ ಮಾತನಾಡಿ, ಸಮಾಜದ ಅಭಿವೃದ್ಧಿಗೆ ಮಾರಕವಾಗಿರುವ ಮಾದಕ ದ್ರವ್ಯಗಳ ಬಳಕೆ ವಿರುದ್ಧ ನಿರಂತರ ಜಾಗೃತಿ ಅಗತ್ಯವಿದೆ ಎಂದು ತಿಳಿಸಿದರು.

<><><><>

ಜೆಡಿಎಸ್ ನಾಯಕ ಸೂರಜ್ ರೇವಣ್ಣ ವಿರುದ್ಧದ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಐಡಿ ಅಧಿಕಾರಿಗಳು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಬಿ ರಿಪೋರ್ಟ್ ಸಲ್ಲಿಸಿದ್ದಾರೆ. ೨೦೨೪ರ ಜೂನ್‌ನಲ್ಲಿ ದಾಖಲಾಗಿದ್ದ ಎರಡು ಪ್ರಕರಣಗಳಲ್ಲಿ ಸಾಕ್ಷಾಧಾರಗಳ ಕೊರತೆ ಹಿನ್ನೆಲೆಯಲ್ಲಿ ಒಂದರಲ್ಲಿ ಬಿ ರಿಪೋರ್ಟ್ ಸಲ್ಲಿಕೆಯಾಗಿದೆ. ಸೂರಜ್ ರೇವಣ್ಣ ವಿರುದ್ಧ ೨೦೨೪ರ ಜೂನ್ ೨೨ ರಂದು ಸಂತ್ರಸ್ತರೊಬ್ಬರು ದೂರು ನೀಡಿದ್ದರು.

<><><><>

ಯಾದಗಿರಿ ಜಿಲ್ಲೆಯಲ್ಲಿನ ನಕಲಿ ವೈದ್ಯರು ಹಾಗೂ ಆಸ್ಪತ್ರೆಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ. ಬಿ. ಸುಶೀಲಾ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಪಿಸಿಪಿಎನ್‌ಡಿಟಿ ಹಾಗೂ ಕೆಪಿಎಂಇ ಕಾಯ್ದೆಯಡಿ ಬಂದಿರುವ ಅರ್ಜಿಗಳ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯಾವುದೇ ವೈದ್ಯಕೀಯ ಪದವಿಗಳಿಲ್ಲದ ನಕಲಿ ವೈದ್ಯರಿಂದ ಚಿಕಿತ್ಸೆ ಪಡೆಯುವುದರಿಂದ ಬಡಜನರ ಜೀವಕ್ಕೆ ಅಪಾಯವಾಗಲಿದೆ. ಈ ಹಿನ್ನೆಲೆಯಲ್ಲಿ ನೋಂದಾಯಿತವಲ್ಲದ ಆಸ್ಪತ್ರೆ ಹಾಗೂ ನಕಲಿ ವೈದ್ಯರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಿಮಿನಲ್ ಪ್ರಕರಣ ದಾಖಲಿಸಿ ಎಂದು ಸೂಚನೆ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>